# ಕರ್ನಾಟಕ ಸರ್ಕಾರದ ನಡವಳಿಗಳು



ವಿಷಯ:- ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯಾಗಾರ/ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಲುವಾಗಿ ಮೈಸೂರಿನ ಆಡಳಿತ ತರಬೇತಿ ಸಂಸ್ಥೆಗೆ ರೂ.50.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 20 ಇಕಾಅ 2012, ದಿನಾಂಕ:09.04.2013
4. ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ಎಟಿಐ/ಟಿಆರ್‌ಜಿ/ಸಕಾಲ-4/2013-14, ದಿನಾಂಕ:10/7/2013.

ಪ್ರಸ್ತಾವನೆ :

ಮೇಲೆ ಓದಲಾದ(1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ, 2011ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ ಸಕಾಲ ಯೋಜನೆಯ ತರಬೇತಿ ಕಾರ್ಯಕ್ರಮಕ್ಕಾಗಿ 3ನೇ ಹಂತದ ಮೊದಲನೇ ಕಂತಾಗಿ ರೂ.50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಪತ್ರದಲ್ಲಿ ಸಕಾಲ ಯೋಜನೆಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅವಶ್ಯಕವಾದ ಹಣವನ್ನು ಬಿಡುಗಡೆ ಮಾಡುವಂತೆ ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರುರವರು ಕೋರಿರುತ್ತಾರೆ. ಅದರಂತೆ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಪರಿಶೀಲಿಸಲಾಗಿ, ಸಕಾಲ ಯೋಜನೆಯ 3ನೇ ಹಂತದ ತರಬೇತಿ ಕಾರ್ಯಕ್ರಮದ 2ನೇ ಕಂತಾಗಿ ರೂ.50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದಲ್ಲಿ ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 20 ಇಕಾಅ 2012, ಬೆಂಗಳೂರು ದಿನಾಂಕ:06ನೇ ಆಗಸ್ಟ್ 2013.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಸಕಾಲ ಯೋಜನೆಯ 3ನೇ ಹಂತದ ಕಾರ್ಯಾಗಾರ/ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಸಲುವಾಗಿ ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ ಎರಡನೇ ಕಂತಾಗಿ ರೂ.50.00 ಲಕ್ಷ (ಐವತ್ತುಲಕ್ಷ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಮೇಲಿನ ವೆಚ್ಚವನ್ನು ಲೆಕ್ಕಶೀರ್ಷಿಕೆ "2052-00-090-0-26-051" (ಯೋಜನೇತರ) "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ರ ಅನುಷ್ಠಾನದಡಿ 2013-14ನೇ ಸಾಲಿಗೆ ಒದಗಿಸಿರುವ ಅನುದಾನದಿಂದ ಭರಿಸುವುದು.

ಈ ಮೇಲಿನ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 04 ಟಿಎಫ್‌ಪಿ 2012, ದಿನಾಂಕ:27.04.2012 ಹಾಗೂ ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಎನ್.ವರಪ್ರಸಾದ ರೆಡ್ಡಿ)
ಆಡಳಿತಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ
ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

ಇವರಿಗೆ:

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ) (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು-5700011.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ:ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ (ಆಸು) ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಡಳಿತಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಸಕಾಲ ಮಂಡಳಿ, ಸಿಆಸುಇ (ಆಸು) ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.